ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ವೀರಪ್ಪ ಮೊಯಲಿ (ಶಿಕ್ಷಣ ಸಚಿವರು) : ಮಾನ್ಯ ಅಧ್ಯಕ್ಷರೆ, ದಿನಾಂಕ 27-9-91 ರಂದು ಲಿಖಿತ ಮೂಲಕ ಉತ್ತರಿಸುವ ಪ್ರಶ್ನೋತ್ತರಗಳ 27ನೇ ಪಟ್ಟಿಯಲ್ಲಿನ 100 ಪ್ರಶ್ನೆಗಳ ಪೈಕಿ 81 ಚುಕ್ಕೆಗುರುತಿಲ್ಲದ ಪ್ರಶ್ನೆಗಳಿಗೆ ಉತ್ತರವನ್ನು ಸಭೆಯ ಮುಂದೆ ಇಡುತ್ತೇನೆ.

ಬಂಟ್ವಾಳ ತಾಲ್ಲೂಕಿನ ವಿದ್ಯುತ್ ಸಹಕಾರಿ ಸಂಘವನ್ನು ಚುರುಕುಗೊಳಿಸುವುದರ ಬಗ್ಗೆ

2669 - ಶ್ರೀ ಎ. ರುಕ್ಮಯ್ಯಪೂಜಾರಿ (ವಿಟ್ಲ) : ಮಾನ್ಯ ಸಹಕಾರ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಂಟ್ವಾಳ ತಾಲ್ಲೂಕಿನ ವಿದ್ಯುತ್ ಸಹಕಾರ ಸಂಘವು ಎಂದಿನಿಂದ ಕಾರ್ಯನಿರ್ವಹಿಸುತ್ತಿದೆ?

ಆ) ಅದು ನಿಷ್ಕ್ರಿಯವಾಗಿರಲು ಕಾರಣವೇನು ಹಾಗೂ ಈ ವಿದ್ಯುತ್ ಸಹಕಾರಿ ಸಂಘವನ್ನು ಚುರುಕುಗೊಳಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು?

ಶ್ರೀ ಎಸ್.ಆರ್. ಮೋರೆ (ಸಹಕಾರ ರಾಜ್ಯ ಸಚಿವರು) :

ಅ) ಇನ್ನೂ ಕಾರ್ಯಾರಂಭ ಮಾಡಿರುವುದಿಲ್ಲ

ಆ) ಗ್ರಾಮೀಣ ವಿದ್ಯುತ್ತೀಕರಣ ನಿಗಮ ನವದೆಹಲಿ ಇವರಿಂದ ಈ ಸಂಘದ ಯೋಜನೆಗೆ ಮಂಜೂರಾತಿ ದೊರೆತಿರುವುದಿಲ್ಲವಾದ ಕಾರಣ ಸಂಘದ ಕಾರ್ಯ ಚಟುವಟಿಕೆಯನ್ನು ಪ್ರಾರಂಭಿಸಲು ಸಾಧ್ಯವಿರುವುದಿಲ್ಲ.

ಇ) ಸದರಿ ಯೋಜನಾ ವರದಿಯನ್ನು ಮಂಜೂರು ಮಾಡುವಂತೆ ಗ್ರಾಮೀಣ ವಿದ್ಯುದೀಕರಣ ನಿಗಮವನ್ನು ವಿನಂತಿಸಲಾಗಿರುತ್ತದೆ. ಆದರೆ ಈಗಾಗಲೇ ಯೋಜನಾವರದಿಗೆ ಮಂಜೂರಾತಿ ಪಡೆದಿರುವ ಎರಡು ವಿದ್ಯುಚ್ಛಕ್ತಿ ಸಹಕಾರ ಸಂಘಗಳು ಕಾರ್ಯಾರಂಭ ಮಾಡುವವರೆಗೆ ಇತರ ಸಂಘಗಳ ಯೋಜನೆ ವರದಿಯನ್ನು ತಯಾರಿಸಲು ಕಾಯಬಹುದಾಗಿದೆ ಎಂದು ನಿಗಮವು ತಿಳಿಸಿರುತ್ತದೆ.

ದಕ್ಷಿಣ ಕನ್ನಡ ಜಿಲ್ಲೆಯ ವಿದ್ಯುತ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

2678 - ಶ್ರೀ ಎ. ರುಕ್ಮಯ್ಯ ಪೂಜಾರಿ (ವಿಟ್ಲ) : ಮಾನ್ಯ ಇಂಧನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಕ್ಷಿಣ ಕನ್ನಡ ಜಿಲ್ಲೆಯ ವಿದ್ಯುತ್ ಇಲಾಖೆಯಲ್ಲಿ ವಿವಿಧ ವರ್ಗಗಳಲ್ಲಿ ಹುದ್ದೆಗಳು ಖಾಲಿ ಇರುವುದು ನಿಜವೆ? ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು?

ಆ) ಹಾಗಿದ್ದಲ್ಲಿ ಇದರಿಂದಾಗಿ ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಈ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳುವುದೇ? ಹಾಗಿದ್ದಲ್ಲಿ ಎಂದಿನಿಂದ ?

ಶ್ರೀ ಎಂ. ರಾಮಪ್ಪ (ಇಂಧನ ರಾಜ್ಯ ಮಂತ್ರಿಗಳು) :